- -

**ಪಿ.ಸಿ. ನಂ.531/2025**

**ಸಿ. ಡಬ್ಲ್ಯೂ: 1**

**( ಇಂದು ದಿಃ 03/09/2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.)**

**ಪಿರ್ಯಾದುದಾರರ ಸ್ವ ಪ್ರಮಾಣೀಕೃತ ಹೇಳಿಕೆ**

ನಾನು ಸಂಘದ ಪರವಾಗಿ ಸ್ವ ಪ್ರಮಾಣೀಕೃತ ಹೇಳಿಕೆಯ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದರಲ್ಲಿ ಬರೆದ ಎಲ್ಲಾ ವಿಷಯಗಳು ನಿಜ ಇರುತ್ತವೆ. ಅದಕ್ಕೆ ನಾನು ಸಹಿ ಮಾಡಿರುತ್ತೇನೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ, ಚೆಕ್ಕನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕ್ ಹಿಂಬರಹವನ್ನು ನಿಪಿ-2 ಎಂದು, ಆರೋಪಿಗೆ ನೀಡಿರುವ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ರಶೀದಿ ನಿಪಿ-4 ಎಂದು,ಆರೋಪಿಗೆ ಕಳುಹಿಸಿದ ನೋಟೀಸು ಆರೋಪಿ ಸ್ವೀಕರಿಸದೇ ವಾಪಸ್ಸು ಬಂದಿರುವ ಅಂಚೆ ಲಕೋಟೆಯನ್ನು ನಿಪಿ-5 ಎಂದು, ಸದ್ರಿ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಿ ಅದರಲ್ಲಿ ಇರುವ ನೋಟೀಸಿನ ಪ್ರತಿಯನ್ನು ನಿಪಿ-5ಎ ಎಂದು, ಠರಾವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಆರೋಪಿಯ ಸಾಲದ ಅರ್ಜಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು, ಆರೋಪಿಯ ಸಾಲದ ಭದ್ರತಾ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು, ಡಿಮ್ಯಾಂಡ್ ಪ್ರಾಮಿಸರಿ ನೋಟಿನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-9 ಎಂದು, ಆರೋಪಿಯ ಬಳಕೆ ಸಾಲದ ಕರಾರು ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-10 ಎಂದು, ಬ್ಯಾಂಕ್ ರಶೀದಿಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು, ಬ್ಯಾಂಕ್ ಸ್ಟೇಟ್ ಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು.

ಆದ್ದರಿಂದ ದೂರಿನಲ್ಲಿ ಕೇಳಿದಂತೆ ಆದೇಶವಾಗಬೇಕೆಂದು ಕೋರುತ್ತೇನೆ .

**(ನನ್ನ ಹೇಳಿಕೆ ಪ್ರಕಾರ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)**

**ಓ. ಹೇ.ಕೇ. ಸರಿ ಇದೆ**

**ಸಹಿ ಇದೆ**

**ಪ್ರ.ದ.ನ್ಯಾ.ದಂ., ಭಟ್ಕಳ**